# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 18-03-2021 ಪ್ರಶ್ನೆ ಸಂಖ್ಯೆ : 213(1554)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ರವಿಕುಮಾರ್(ವಿಧಾನ ಸಭೆಯಿಂದ ಚುನಾಯಿತರಾದವರು )

ಉತ್ತರ ನೀಡಬೇಕಾದ ದಿನಾಂಕ : 18-03-2021

ಉತ್ತರಿಸುವ ಸಚಿವರು: ಸಣ್ಣ ನೀರಾವರಿ ಸಚಿವರು

ವಿಷಯ : ಚಿಕ್ಕಮಗಳೂರಿನ ಬೆಳವಾಡಿ ದೊಡ್ಡಕೆರೆಯ ಅಭಿವೃದ್ಧಿ ಪಡಿಸುವ ಕುರಿತು

(ಅ) ಚಿಕ್ಕಮಗಳೂರು ತಾಲ್ಲೂಕಿನ ಬೆಳವಾಡಿ ದೊಡ್ಡಕರೆಯ ಅಭಿವೃದ್ಧಿಗೆ ಸರ್ಕಾರ ಎಷ್ಟು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿತ್ತು; ಸದರಿ ಯೋಜನೆಯನ್ನು ಪುನರ್ ವಿನ್ಯಾಸ ಮಾಡಲು ಶಿಫಾರಸ್ಸು ಮಾಡಲಾಗಿದೆಯೇ; ಯಾರು ಮತ್ತು ಯಾವ ಕಾರಣಗಳಿಗೆ ಎಂಬ ಕುರಿತು ಮಾಹಿತಿ ನೀಡುವುದು;

(ಆ) ಈ ಕಾಮಗಾರಿಯಲ್ಲಿ ಭ್ರಷ್ಟಾಚಾರವೆಸಗಿರುವ ಕುರಿತು ಸರ್ಕಾರದ ನಿಲುವೇನು; ಭ್ರಷ್ಟಾಚಾರವೆಸಗಿದ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ; ಸದರಿ ಮೊತ್ತವನ್ನು ಸಂಬಂಧಪಟ್ಟ ಅಧಿಕಾರಿಗಳಿಂದ ವಸೂಲಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಇ) ಒಂದು ಏತ ನೀರಾವರಿ ಕಾಮಗಾರಿಯು ಚಾಲನೆಯಲ್ಲಿದ್ದಾಗ ಅದೇ ಕಾಮಗಾರಿಯನ್ನು ಮುಂದುವರೆಸಿ ಪೂರ್ಣಗೊಳಿಸದೆ ಹೊಸ ಏತ ನೀರಾವರಿ ಯೋಜನೆ ಜಾರಿಗೊಳಿಸಲು ಕಾರಣವೇನು?